ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು 560001

**ಸಂಖ್ಯೆ: ಎಡಿಎಂ.2(1)ಅ.ಮಾ.ಅ 01 /2017-18** **ದಿನಾಂಕ: 05-06-2017**

# ಅಧಿಕೃತ ಜ್ಞಾಪನಾ

ವಿಷಯ: ಸರ್ಕಾರಿ ಶಾಲೆಗಳಲ್ಲಿ 6 ಮತ್ತು 7ನೇ ತರಗತಿಯಲ್ಲಿ ಪ್ರಸ್ತುತ ಬೋಧಿಸುತ್ತಿರುವ ಮಾಧ್ಯಮದ ಜೊತೆಯಲ್ಲಿ ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಉಪನಿರ್ದೇಶಕರ ಹಂತದಲ್ಲಿ ಅನುಮತಿ ನೀಡುವ ಬಗ್ಗೆ

******

**ಪ್ರಸ್ತಾವನೆ:**

ಸರ್ಕಾರಿ ಶಾಲೆಗಳಲ್ಲಿ ಪ್ರಸ್ತುತ ಬೋಧಿಸುತ್ತಿರುವ ಮಾಧ್ಯಮದ ಜೊತೆಗೆ 6 ಮತ್ತು 7ನೇ ತರಗತಿಯಲ್ಲಿ ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಅನುಮತಿ ನೀಡುವ ಬಗ್ಗೆ ಜಿಲ್ಲೆಗಳಿಂದ ಉಪನಿರ್ದೇಶಕರ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಗಳು ಈ ಕಛೇರಿಯಲ್ಲಿ ಸ್ವೀಕೃತಗೊಳ್ಳುತ್ತಿವೆ. ಈ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿ, ಆಡಳಿತಾತ್ಮಕ ದೃಷ್ಟಿಯಿಂದ ಸಕಾಲಿಕವಾಗಿ ಕ್ರಮವಹಿಸಿ ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ:**

ರಾಜ್ಯದಲ್ಲಿ ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು/ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಗಳಲ್ಲಿ 6 ಮತ್ತು 7ನೇ ತರಗತಿಯಲ್ಲಿ ಪ್ರಸ್ತುತ ಇರುವ ಮಾಧ್ಯಮದ ಜೊತೆಗೆ ಕೆಳಕಂಡ ಅರ್ಹತಾಂಶಗಳನ್ನು/ಷರತ್ತುಗಳನ್ನು ಪೂರೈಸಿರುವುದನ್ನು ಖಾತರಿ ಪಡಿಸಿಕೊಂಡು ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಅನುಮತಿ ನೀಡುವ ಅಧಿಕಾರವನ್ನು ಜಿಲ್ಲಾ ಉಪನಿರ್ದೇಶಕರುಗಳಿಗೆ ಪ್ರತ್ಯಾಯೋಜಿಸಲಾಗಿದೆ.

**ಅರ್ಹತಾಂಶಗಳು:**

1. ಶಾಲೆಯು ಹಿರಿಯ ಪ್ರಾಥಮಿಕ ಶಾಲೆ/ಮಾದರಿ ಪ್ರಾಥಮಿಕ ಶಾಲೆಯಾಗಿದ್ದು, ಒಂದರಿಂದ ಏಳನೇ ತರಗತಿ ವರೆಗೆ ನಡೆಯುತ್ತಿರಬೇಕು.
2. ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಮನಾರ್ಹವಾಗಿರಬೇಕು.
3. ಶಾಲೆಯಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಅಗತ್ಯಕ್ಕೆ ತಕ್ಕಂತೆ ತರಗತಿ ಕೊಠಡಿಗಳು ಲಭ್ಯವಿರಬೇಕು.
4. ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಅರ್ಹ ಶಿಕ್ಷಕರು ಇರಬೇಕು.
5. 6 ಮತ್ತು 7ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆಯುವ ಬಗ್ಗೆ ಶಿಕ್ಷಕರ ಒಪ್ಪಿಗೆ ಹಾಗೂ ಎಸ್.ಡಿ.ಎಂ.ಸಿ. ನಡವಳಿ ಪಾಸ್ ಮಾಡಿರಬೇಕು.
6. 6 ಮತ್ತು 7ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆಯುವ ಬಗ್ಗೆ ಪೋಷಕರ ಒಪ್ಪಿಗೆ ಪಡೆದಿರಬೇಕು.
7. 6 ಮತ್ತು 7ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸುವ ಬಗ್ಗೆ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗಬಾರದು.

8. ಸದರಿ ಶಾಲೆಯಲ್ಲಿ ಈಗಾಗಲೇ ನಡೆಯುತ್ತಿರುವ ತರಗತಿಗಳ ಕೊಠಡಿ, ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳಲ್ಲಿಯೇ ಆಂಗ್ಲ ಮಾಧ್ಯಮ ಹೆಚ್ಚುವರಿ ವಿಭಾಗಗಳನ್ನು ನಡೆಸುವುದು.
9. ಮಕ್ಕಳ ಸಂಖ್ಯೆಗಳಿಗನುಗುಣವಾಗಿ ಆಂಗ್ಲ ಮಾಧ್ಯಮ ಪಠ್ಯಪುಸ್ತಕಗಳ ಬೇಡಿಕೆ ಪಟ್ಟಿಯನ್ನು ಸಕಾಲದಲ್ಲಿ ಪಠ್ಯಪುಸ್ತಕ ಸೊಸೈಟಿಗೆ ಸಲ್ಲಿಸುವುದು.
10. ಪ್ರಸ್ತಾಪಿತ ಶಾಲೆಯಿಂದ ಕನಿಷ್ಠ ಇಬ್ಬರು ಶಿಕ್ಷಕರನ್ನು ಆರ್.ಐ.ಇ., ಬೆಂಗಳೂರು ಇವರು ಆಯೋಜಿಸುವ ಒಂದು ತಿಂಗಳ ಅವಧಿಯ "English Language Empowerment Programme for Primary School Teachers in Karnataka" ತರಬೇತಿಗೆ ನಿಯೋಜಿಸುವುದು.

**"ಮಾನ್ಯ ಆಯುಕ್ತರ ಆದೇಶದ ಮೇರೆಗೆ"**

ನಿರ್ದೇಶಕರು (ಸಾ.ಪ್ರ)
(ಪ್ರಾಥಮಿಕ ಶಿಕ್ಷಣ)

ಇವರಿಗೆ,

1. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ, ಆಯುಕ್ತಾಲಯ ಧಾರವಾಡ ಕಲುಬುರ್ಗಿ, ಆಯುಕ್ತಾಲಯ, ಕಲುಬುರ್ಗಿ ಜಿಲ್ಲೆ. ರವರಿಗೆ ರವಾನಿಸುತ್ತಾ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ನಿರ್ದೇಶನ ನೀಡಲು ಕೋರಿದೆ.
2. ಬೆಂಗಳೂರು, ಮತ್ತು ಮೈಸೂರು ವಿಭಾಗಗಳಲ್ಲಿ ಬರುವ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.